# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

ಮುಕ್ತಗಂಗೋತ್ರಿ, ಮೈಸೂರು – 06.

ಸಂಖ್ಯೆ:ಕರಾಮುವಿ/ಪವಿ/5.1/ಯು.ಜಿ.ಪಿ.ಜಿ/ಪ/128/2019-20 ದಿನಾಂಕ:-31-03-2023

## ಪರೀಕ್ಷಾ ಅಧಿಸೂಚನೆ

ವಿಷಯ:- 2018-19ನೇ ಶೈಕ್ಷಣಿಕ ಸಾಲಿನಿಂದ 2021-22ನೇ ಶೈಕ್ಷಣಿಕ ಸಾಲಿನವರೆಗೆ (ಜುಲೈ/ಜನವರಿ ಆವೃತ್ತಿ) ಹಾಗೂ 2022-23ನೇ ಸಾಲಿನಲ್ಲಿ (ಜುಲೈ ಆವೃತ್ತಿಯ) ಪ್ರವೇಶಾತಿ ಪಡೆದಿರುವ ಎಲ್ಲಾ ಸ್ನಾತಕ/ಸ್ನಾತಕೋತ್ತರ ಕಾರ್ಯಕ್ರಮಗಳ (UG/PG) ವಿದ್ಯಾರ್ಥಿಗಳಿಗೆ (CBCS / NON CBCS) ಪರೀಕ್ಷಾ ಶುಲ್ಕ ಪಾವತಿಸುವ ಬಗ್ಗೆ.

ಉಲ್ಲೇಖ:- ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 30-03-2023

*****

ವಿಶ್ವವಿದ್ಯಾನಿಲಯದಲ್ಲಿ 2018-19 ರಿಂದ 2020-21ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶಾತಿ ಪಡೆದು ವಿವಿಧ ಕಾರ್ಯಕ್ರಮಗಳಲ್ಲಿ ಅನುತ್ತೀರ್ಣರಾಗಿರುವ/ ಪರೀಕ್ಷೆ ತೆಗೆದುಕೊಂಡಿಲ್ಲದ ವಿದ್ಯಾರ್ಥಿಗಳಿಗೆ ಹಾಗು 2021-22ನೇ ಶೈಕ್ಷಣಿಕ ಸಾಲಿನ (ಜುಲೈ/ಜನವರಿ ಆವೃತ್ತಿ) ಮತ್ತು 2022-23ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ ಆವೃತ್ತಿ) ವಾರ್ಷಿಕ/ ಸೆಮಿಸ್ಟರ್ ಕಾರ್ಯಕ್ರಮಗಳಿಗೆ ಪ್ರವೇಶಾತಿ ಪಡೆದಿರುವ ಸ್ನಾತಕ/ಸ್ನಾತಕೋತ್ತರ ಕಾರ್ಯಕ್ರಮಗಳ (UG/PG) ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ಅಧಿಸೂಚನೆ ಹೊರಡಿಸಲಾಗಿದೆ.

ಈ ಸಂಬಂಧ ಕೆಳಕಂಡ ಕಾರ್ಯಕ್ರಮಗಳ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಗೆ ದಿನಾಂಕ ನಿಗಧಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.

- 2022-23ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ ಆವೃತ್ತಿ) ಪ್ರವೇಶಾತಿ ಪಡೆದಿರುವ ಸ್ನಾತಕ ಕಾರ್ಯಕ್ರಮಗಳಾದ **ಎಲ್ಲಾ ಬಿ.ಎಸ್ಸಿ, ಬಿ.ಬಿ.ಎ, ಬಿ.ಸಿ.ಎ** ಕಾರ್ಯಕ್ರಮಗಳ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳು ಹಾಗು 2021-2022ನೇ ಸಾಲಿನ (ಜುಲೈ/ಜನವರಿ ಆವೃತ್ತಿ) ಪ್ರಥಮ ಸೆಮಿಸ್ಟರ್ ಅನುತ್ತೀರ್ಣ/ ಪರೀಕ್ಷೆ ತೆಗೆದುಕೊಂಡಿಲ್ಲದ ವಿದ್ಯಾರ್ಥಿಗಳು ಮತ್ತು ದ್ವಿತೀಯ ಸೆಮಿಸ್ಟರ್ ವಿದ್ಯಾರ್ಥಿಗಳು (Fresh Students).
- 2022-23ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ ಆವೃತ್ತಿ) ಪ್ರವೇಶಾತಿ ಪಡೆದಿರುವ ಎಂ.ಎ/ಎಂ.ಕಾಂ. ಕಾರ್ಯಕ್ರಮಗಳ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳು (CBCS/ NON CBCS) ಹಾಗು 2021-2022ನೇ ಸಾಲಿನ (ಜುಲೈ/ಜನವರಿ ಆವೃತ್ತಿ) ಪ್ರಥಮ ಸೆಮಿಸ್ಟರ್ ಅನುತ್ತೀರ್ಣ/ ಪರೀಕ್ಷೆ ತೆಗೆದುಕೊಂಡಿಲ್ಲದ (CBCS) ವಿದ್ಯಾರ್ಥಿಗಳು ಮತ್ತು ದ್ವಿತೀಯ ಸೆಮಿಸ್ಟರ್ ವಿದ್ಯಾರ್ಥಿಗಳು(Fresh Students).
- 2022-23ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ ಆವೃತ್ತಿ) ಪ್ರವೇಶಾತಿ ಪಡೆದ ಎಂ.ಲಿಬ್.ಐ.ಎಸ್ಸಿ ಕಾರ್ಯಕ್ರಮಗಳ ಪ್ರಥಮ ಸೆಮಿಸ್ಟರ್ (CBCS) ವಿದ್ಯಾರ್ಥಿಗಳು ಮತ್ತು 2021-22ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ/ಜನವರಿ ಆವೃತ್ತಿ) ಪ್ರವೇಶಾತಿ ಪಡೆದಿರುವ ಅನುತ್ತೀರ್ಣರಾದ/ ಪರೀಕ್ಷೆ ತೆಗೆದುಕೊಂಡಿಲ್ಲದ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳು ಮತ್ತು ದ್ವಿತೀಯ ಸೆಮಿಸ್ಟರ್ (CBCS) ವಿದ್ಯಾರ್ಥಿಗಳು (Fresh Students).
- 2022-23ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ ಆವೃತ್ತಿ) ಪ್ರವೇಶಾತಿ ಪಡೆದ ಎಂ.ಬಿ.ಎ ಮತ್ತು ಎಲ್ಲಾ ಎಂ.ಎಸ್ಸಿ ಕಾರ್ಯಕ್ರಮದ ಪ್ರಥಮ ಸೆಮಿಸ್ಟರ್ (CBCS) ವಿದ್ಯಾರ್ಥಿಗಳು. ಮತ್ತು 2021-22ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ/ಜನವರಿ ಆವೃತ್ತಿ) ಪ್ರವೇಶಾತಿ ಪಡೆದಿರುವ ಅನುತ್ತೀರ್ಣರಾದ/ ಪರೀಕ್ಷೆ ತೆಗೆದುಕೊಂಡಿಲ್ಲದ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳು ಹಾಗೂ ದ್ವಿತೀಯ ಸೆಮಿಸ್ಟರ್ (CBCS) ವಿದ್ಯಾರ್ಥಿಗಳು ಮತ್ತು ನಾಲ್ಕನೇ ಸೆಮಿಸ್ಟರ್ ( NON CBCS) ವಿದ್ಯಾರ್ಥಿಗಳು.
- 2018-19, 2019-20, 2020-21 ಮತ್ತು 2021-22ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ/ಜನವರಿ ಆವೃತ್ತಿ) ಪ್ರವೇಶಾತಿ ಪಡೆದಿರುವ ಎಂ.ಬಿ.ಎ/ಎಲ್ಲಾ ಎಂ.ಎಸ್ಸಿ ಕಾರ್ಯಕ್ರಮಗಳ ನಾಲ್ಕು ಸೆಮಿಸ್ಟರ್‌ಗಳ (ಪ್ರಥಮ, ದ್ವಿತೀಯ, ತೃತೀಯ ಮತ್ತು ನಾಲ್ಕನೇ) ಅನುತ್ತೀರ್ಣರಾದ/ ಪರೀಕ್ಷೆ ತೆಗೆದುಕೊಂಡಿಲ್ಲದ NON CBCS ವಿದ್ಯಾರ್ಥಿಗಳು.
- 2019-20ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿ ಪಡೆದ ಎಂ.ಎಸ್ಸಿ ಮನೋವಿಜ್ಞಾನ ಕಾರ್ಯಕ್ರಮದ ನಾಲ್ಕನೇ ಸೆಮಿಸ್ಟರ್ NON CBCS ವಿದ್ಯಾರ್ಥಿಗಳು.

ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕಗಳು ಮತ್ತು ಪಾವತಿಸಬೇಕಾಗಿರುವ ಶುಲ್ಕದ ವಿವರಗಳು ಈ ಕೆಳಕಂಡಂತಿದ್ದು, ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.ksoumysuru.ac.inನಲ್ಲಿ ಪರೀಕ್ಷಾ ಅರ್ಜಿ ಮತ್ತು ಪರೀಕ್ಷಾ ಶುಲ್ಕವನ್ನು ಎಲ್ಲಾ ಅಗತ್ಯ ವಿವರಗಳೊಂದಿಗೆ ಭರ್ತಿಮಾಡಿ ಕಡ್ಡಾಯವಾಗಿ ಅಂತರ್ಜಾಲದ (Online) ಮೂಲಕವೇ ಸಲ್ಲಿಸುವುದು. ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸುವಾಗ ತೊಂದರೆಗಳು ಎದುರಾದಲ್ಲಿ ಆನ್‌ಲೈನ್ ಸಹಾಯವಾಣಿ ಸಂಖ್ಯೆ 8800335638 ಯನ್ನು ಸಂಪರ್ಕಿಸುವುದು.

ಪರೀಕ್ಷಾ ಶುಲ್ಕ ಪಾವತಿಸುವ ಪ್ರಾರಂಭದ ದಿನಾಂಕ : 05-04-2023
ದಂಡ ಶುಲ್ಕವಿಲ್ಲದೆ ಪಾವತಿಗೆ ಕಡೆ ದಿನಾಂಕ : 24-04-2023
ರೂ.200/- ದಂಡ ಶುಲ್ಕದೊಂದಿಗೆ ಪಾವತಿಗೆ ಕಡೆ ದಿನಾಂಕ: 03-05-2023

**ಸದರಿ ಪರೀಕ್ಷೆಗಳನ್ನು ದಿನಾಂಕ: 18-05-2023 ರಿಂದ ಪ್ರಾರಂಭಿಸಲಾಗುವುದು.**

**ಪರೀಕ್ಷೆಗಳ ದಿನಾಂಕಗಳ ವೇಳಾಪಟ್ಟಿಯನ್ನು ವಿ.ವಿ. ನಿಲಯದ ಅಂತರ್ಜಾಲ www.ksoumysuru.ac.in ದಲ್ಲಿ ಮುಂದೆ ಪ್ರಕಟಿಸಲಾಗುವುದು.**

**ಈ ಕೆಳಕಂಡ ಕೇಂದ್ರಗಳಲ್ಲಿ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಲಾಗಿದೆ.**

| | |
|---|---|
| ಬಿ.ಬಿ.ಎ/ಬಿ.ಸಿ.ಎ/ಎಲ್ಲಾ ಬಿ. ಎಸ್ಸಿ ಕಾರ್ಯಕ್ರಮಗಳು ಎಂ.ಎ/ಎಂ.ಕಾಂ/ಎಂ.ಲಿಬ್.ಐ.ಎಸ್ಸಿ (ವಾರ್ಷಿಕ/ಸೆಮಿಸ್ಟರ್ ಪದವಿಗಳು) ಎಂ.ಬಿ.ಎ ಮತ್ತು ಎಲ್ಲಾ ಎಂ.ಎಸ್ಸಿ (ಸೆಮಿಸ್ಟರ್ ಪದವಿಗಳು) | ಬಾಗಲಕೋಟೆ, ಬೆಂಗಳೂರು, ಪುತ್ತೂರು, ಮೈಸೂರು, ಚಾಮರಾಜನಗರ, ಹಾಸನ, ಮಂಗಳೂರು, ಉಡುಪಿ, ಕಾರವಾರ, ಶಿವಮೊಗ್ಗ, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಬಳ್ಳಾರಿ, ಧಾರವಾಡ, ಬೆಳಗಾವಿ, ಕಲಬುರ್ಗಿ, ಅಂಗಸೂಗೂರು, ಸಿರಿವಾರ, ಕಾಳಗಿ, ಮಂಡ್ಯ, ತುಮಕೂರು, ಕೋಲಾರ, ರಾಮನಗರ, ಮಡಿಕೇರಿ, ಚಿಕ್ಕೋಡಿ, ಶಿರಸಿ, ಗದಗ, ಯಾದಗಿರಿ, ವಿಜಯಪುರ, ಬೀದರ್. ಘಟಪ್ರಭಾ, ಹುಮ್ನಾಬಾದ್(ಹಾಟ್‌ಬೋರ್ಡ್ಲಾ). |

Scanned with Oken Scanner

## ವಿದ್ಯಾರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕಗಳ ಕೋಷ್ಟಕ

**ಸ್ನಾತಕ/ ಸ್ನಾತಕೋತ್ತರ (U.G/P.G) ಪದವಿ ಕೋರ್ಸ್‌ಗಳು**

| ಕ್ರಮ ಸಂಖ್ಯೆ | ಕಾರ್ಯಕ್ರಮಗಳು | ಪೂರ್ಣಪರೀಕ್ಷೆಗೆ | ಒಂದು ಪತ್ರಿಕೆಗೆ | ಎರಡು ಪತ್ರಿಕೆಗೆ | ಮೂರು ಪತ್ರಿಕೆಗೆ | ನಾಲ್ಕು ಪತ್ರಿಕೆಗೆ | ಐದು ಪತ್ರಿಕೆಗೆ | ಐದು ಮತ್ತು ಅದಕ್ಕೂ ಹೆಚ್ಚಿನ ಪತ್ರಿಕೆಗಳಿಗೆ |
|---|---|---|---|---|---|---|---|---|
| 01 | ಬಿ.ಬಿ.ಎ | ಪ್ರಥಮ ಸೆಮಿಸ್ಟರ್ - 1100<br>ದ್ವಿತೀಯ ಸೆಮಿಸ್ಟರ್- 1100 | 600 | 650 | 800 | 900 | 1100 | 1100 |
| 02 | ಬಿ.ಎಸ್ಸಿ(ಐ.ಟಿ)/ಬಿ.ಸಿ.ಎ /ಎಲ್ಲಾ ಬಿ.ಎಸ್ಸಿ | ಪ್ರಥಮ ಸೆಮಿಸ್ಟರ್ - 2000<br>ದ್ವಿತೀಯ ಸೆಮಿಸ್ಟರ್- 2000 | 1000 | 1100 | 1200 | 1500 | 2000 | 2000 |
| 03 | ಎಂ.ಎ/ಎಂ.ಕಾಂ (CBCS/NON CBCS) | ವಾರ್ಷಿಕ ಪರೀಕ್ಷೆ- 1500<br>ಸೆಮಿಸ್ಟರ್- 1500 | 650 | 900 | 1200 | 1500 | 1500 | 1500 |
| 04 | ಎಂ.ಲಿಬ್.ಐ.ಎಸ್ಸಿ | ಪ್ರಥಮ ಸೆಮಿಸ್ಟರ್ - 2000<br>ದ್ವಿತೀಯ ಸೆಮಿಸ್ಟರ್- 2000 | 800 | 1000 | 1250 | 1500 | 1800 | 2000 |
| 05 | ಎಂ.ಬಿ.ಎ(ಸೆಮಿಸ್ಟರ್) | ಪ್ರಥಮ, ದ್ವಿತೀಯ, ತೃತೀಯ ಸೆಮಿಸ್ಟರ್ - 1500<br>ನಾಲ್ಕನೇ ಸೆಮಿಸ್ಟರ್- 1700 | 650 | 900 | 1200 | 1500 | 1500 | 1500 |
| 06 | ಎಲ್ಲಾ ಎಂ.ಎಸ್ಸಿ ಪದವಿಗಳು(ಸೆಮಿಸ್ಟರ್) | ಪ್ರಥಮ, ದ್ವಿತೀಯ, ತೃತೀಯ<br>ನಾಲ್ಕನೇ ಸೆಮಿಸ್ಟರ್- 2500 | 900 | 1250 | 2500 | 2500 | 2500 | ----- |
| 07 | ಎಂ.ಬಿ.ಎ, ಎಲ್ಲಾ ಎಂ.ಎಸ್ಸಿ ಪದವಿಗಳ ನಾಲ್ಕನೇ ಸೆಮಿಸ್ಟರ್ ವಿದ್ಯಾರ್ಥಿಗಳು ಪ್ರಾಜೆಕ್ಟ್, ವೈವಾ ಕಾರ್ಯಕ್ರಮಗಳಿಗೆ ರೂ. 200/-ಗಳನ್ನು ಪಾವತಿಸವುದು. | | | | | | | |

### ವಿದ್ಯಾರ್ಥಿಗಳಿಗೆ ಸೂಚನೆಗಳು

1. ವಿದ್ಯಾರ್ಥಿಗಳು ಕಡ್ಡಾಯವಾಗಿ ಮೇಲ್ಕಂಡ ಪರೀಕ್ಷಾ ಕೇಂದ್ರಗಳಲ್ಲಿ ಒಂದು ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡಿಕೊಳ್ಳಬೇಕು.
2. ವಿದ್ಯಾರ್ಥಿಯು ಆನ್‌ಲೈನ್ ಮೂಲಕವೇ ಶುಲ್ಕವನ್ನು ಪಾವತಿಸಬೇಕು ಹಾಗೂ ಪಾವತಿಸಿದ ಒಂದು ಅರ್ಜಿಯ ಪ್ರತಿಯನ್ನು ಹೊಂದಿರತಕ್ಕದ್ದು.
3. ವಿವಿ ನಿಲಯಕ್ಕೆ ನೇರವಾಗಿ / ಅಂಚೆ ಮೂಲಕ ಪರೀಕ್ಷಾ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.
4. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗೆ ಮರುಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ
5. ವಿದ್ಯಾರ್ಥಿಗಳು ತಮ್ಮ ಸ್ನಾತಕೋತ್ತರ ಕಾರ್ಯಕ್ರಮಗಳ ವಿಷಯಕ್ಕೆ ಸಂಬಂಧಿಸಿದಂತೆ ಪರೀಕ್ಷಾ ಪ್ರವೇಶಾತಿ ಪತ್ರಗಳನ್ನು ಪರೀಕ್ಷೆಗಳು ಪ್ರಾರಂಭವಾಗುವ ಎರಡು ದಿನಗಳ ಮುಂಚೆ ವಿ.ವಿ. ನಿಲಯದ ಅಂತರ್ಜಾಲ <u>www.ksoumysuru.ac.in</u> ನಿಂದ ಪಡೆಯಬಹುದಾಗಿದೆ.
6. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಫೋನ್ ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಫೋನ್ ತರುವುದು ದುರ್ನಡತೆ **(Malpractice)** ಯಾಗುತ್ತದೆ. ಅಂತಹ ವಿದ್ಯಾರ್ಥಿಗಳ ವಿರುದ್ಧ ಕ್ರಮ ಜರುಗಿಸಲಾಗುತ್ತದೆ.
7. **ವಿಶೇಷ ಸೂಚನೆ: ವಿಶ್ವವಿದ್ಯಾನಿಲಯವು ನೀಡಿರುವ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪರೀಕ್ಷೆಗೆ ತರುವುದು.**
8. ಸಂಶೋಧನ ಪ್ರಬಂಧ ಮತ್ತು ಮೌಖಿಕ ಪರೀಕ್ಷೆ/ಪ್ರಾಯೋಗಿಕ ಪರೀಕ್ಷೆಯ ಬಗೆಗೆ ಸಂಬಂಧಿಸಿದ ವಿಭಾಗದ ಮುಖ್ಯಸ್ಥರನ್ನು ಸಂಪರ್ಕಿಸುವುದು.

ಸಹಿ/-

**ಕುಲಸಚಿವರು(ಪರೀಕ್ಷಾಂಗ)**

ಪ್ರತಿಗಳು.

1. ಮಾನ್ಯ ಕುಲಪತಿಗಳ ವಿಶೇಷ ಕರ್ತವ್ಯ ಅಧಿಕಾರಿಗಳು ಕರಾಮುವಿ, ಮೈಸೂರು.
2. ಮಾನ್ಯ ಕುಲಸಚಿವರ ಆಪ್ತಸಹಾಯಕರು, ಕರಾಮುವಿ, ಮೈಸೂರು.
3. ಹಣಕಾಸು ಅಧಿಕಾರಿಗಳು, ಕರಾಮುವಿ, ಮೈಸೂರು.
4. ಡೀನ್(ಶೈಕ್ಷಣಿಕ),ಕರಾಮುವಿ,ಮೈಸೂರು.
5. ಡೀನ್(ಅಧ್ಯಯನ ಕೇಂದ್ರ), ಕರಾಮುವಿ, ಮೈಸೂರು.
6. ಮುಖ್ಯಸ್ಥರು ಎಲ್ಲಾ ಅಧ್ಯಯನ ವಿಭಾಗಗಳು, ಕರಾಮುವಿ, ಮೈಸೂರು.
7. ಎಲ್ಲಾ ಪ್ರಾದೇಶಿಕ ನಿರ್ದೇಶಕರುಗಳು, ಕರಾಮುವಿ ಪ್ರಾದೇಶಿಕ ಕೇಂದ್ರಗಳು, ಕರಾಮುವಿ.
8. ನೋಡೆಲ್ ಅಧಿಕಾರಿಗಳು, ವೆಬ್‌ಸೈಟ್ ನಿರ್ವಹಣೆ, ಕರಾಮುವಿ. ವಿಶ್ವವಿದ್ಯಾನಿಲಯದ ಅಂತರ್‌ಜಾಲದಲ್ಲಿ ಪ್ರಕಟಿಸುವಂತೆ ಕ್ರಮವಹಿಸುವುದು.
9. ಉಪಕುಲಸಚಿವ/ಸಹಾಯಕ ಕುಲಸಚಿವರು/ಅಧೀಕ್ಷಕರು, ಕರಾಮುವಿ, ಮೈಸೂರು.
10. ಕಚೇರಿ ಪ್ರತಿ/ಸಂಬಂಧಿಸಿದ ಕಡತಕ್ಕೆ.

Scanned with Oken Scanner